**ಪ್ರಧಾನಮಂತ್ರಿ ಜನ ಔಷಧಿ ಯೋಜನೆಯ ಪ್ರಧಾನಮಂತ್ರಿ ಜನ ಔಷಧಿ ಕೇಂದ್ರದ ಉದ್ಘಾಟನಾ ಸಮಾರಂಭವನ್ನು ದಿನಾಂಕ: 02-10-2016 ರಂದು ಸಂಜೆ 5:30 ಗಂಟೆಗೆ ಸಾರ್ವಜನಿಕ ಆಸ್ಪತ್ರೆ, ಯಲಹಂಕ, ಬೆಂಗಳೂರು ಇಲ್ಲಿ ನಡೆಸಲಾಯಿತು.**









ಕರ್ನಾಟಕ ಸರ್ಕಾರದ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಶ್ರೀ ಕೆ.ಆರ್. ರಮೇಶ್ ಕುಮಾರ್ ರವರು ಹಾಗೂ ಯಲಹಂಕ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಎಸ್.ಆರ್ ವಿಶ್ವನಾಥ್ ರವರು ಸದರಿ ಕಾರ್ಯಕ್ರಮವನ್ನು ಉದ್ಘಾಟಿಸಿದರು, ಶ್ರೀಮತಿ ಚಂದ್ರಮ್ಮ ಕೆಂಪೇಗೌಡರು, ಬೆಂಗಳೂರು ನಗರ ಜಿಲ್ಲೆಯ, ಜಿಲ್ಲಾ ಪಂಚಾಯತ್‌ನ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀಯುತ ಟಿ.ಜೆ. ನರಸಿಂಹಮೂರ್ತಿ ರವರು, ಶ್ರೀ ಜಯ್ ಪ್ರಿಯೆ ಪ್ರಕಾಶ್ ಭಾ.ಆ.ಸೇ, ಕಾರ್ಯದರ್ಶಿಗಳು, ಔಷಧ ಇಲಾಖೆ ಭಾರತ ಸರ್ಕಾರ, ಶ್ರೀ ಸುಧಾನ್ಶ್ ಪಂತ್ ಭಾ.ಆ.ಸೇ, ಜಂಟಿ ಕಾರ್ಯದರ್ಶಿಗಳು, ರಾಸಾಯನಿಕ ಮತ್ತು ರಸಗೊಬ್ಬರ ಔಷಧ ಇಲಾಖೆ, ಭಾರತ ಸರ್ಕಾರ, ಶ್ರೀ ಬಿಪ್ಲಬ್ ಚಟರ್ಜಿ, ಸಿ.ಇ.ಓ, ಬಿ.ಪಿ.ಪಿ.ಐ, ಭಾರತ ಸರ್ಕಾರ, ಡಾ|| ರತನ್ ಯು. ಕೇಲ್ಕರ್ ಭಾ.ಆ.ಸೇ. ಆಯುಕ್ತರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಆಯುಷ್ ಸೇವೆಗಳು ಮತ್ತು ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ ಕರ್ನಾಟಕ ಸರ್ಕಾರ, ಡಾ|| ಸುರೇಶ್ ಶಾಸ್ತ್ರಿ, ಸಹ

ನಿರ್ದೇಶಕರು (ಐ.ಇ.ಸಿ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಡಾ॥ ರಮೇಶ್ ಬಾಬು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಹಾಗೂ ಎಲ್ಲಾ ಜಿಲ್ಲಾ ಕಾರ್ಯಕ್ರಮಾಧಿಕಾರಿಗಳು ಹಾಗೂ ಎಲ್ಲಾ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು, ವೈದ್ಯೇತರ ಸಿಬ್ಬಂದಿಗಳು ಬೆಂಗಳೂರು ನಗರ ಜಿಲ್ಲೆ, ಆಶಾ ಕಾರ್ಯಕರ್ತೆಯರು ಹಾಗೂ ಅಪಾರ ಸಂಖ್ಯೆಯ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಕ್ಷಯ ರೋಗ ಮತ್ತು ಬಹು ಔಷಧ ನಿರೋಧಕ ಕ್ಷಯರೋಗವನ್ನು ಅತ್ಯಂತ ತ್ವರಿತವಾಗಿ ಪತ್ತೆಹಚ್ಚಲು ರಾಜ್ಯ ಸರ್ಕಾರವು ಜೀನ್ ಎಕ್ಸ್‌ಪರ್ಟ್ ಯಂತ್ರವನ್ನು ಸಾರ್ವಜನಿಕ ಆಸ್ಪತ್ರೆ, ಯಲಹಂಕ, ಬೆಂಗಳೂರು ರಲ್ಲಿ ಅಳವಡಿಸಿದ್ದು, ಅದರ ಉದ್ಘಾಟನೆಯನ್ನು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಶ್ರೀ. ಕೆ.ಆರ್. ರಮೇಶ್ ಕುಮಾರ್ ರವರು ನೆರವೇರಿಸಿದರು.

ಈ ಸಮಾರಂಭದಲ್ಲಿ ಎಲ್ಲಾ ಗಣ್ಯರು ಹಾಗೂ ಅಧಿಕಾರಿಗಳು ಕಾರ್ಯಕ್ರಮ ಮುಗಿಯುವವರೆಗೂ ಹಾಜರಿದ್ದರು. ಅಂತಿಮವಾಗಿ ಡಾ॥ ಮಹೇಶ್ ಕುಮಾರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ, ಬೆಂಗಳೂರು ನಗರ ಜಿಲ್ಲೆ ಇವರು ವಂದನಾರ್ಪಣೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಳಿಸಲಾಯಿತು.